# ಜಿಲ್ಲಾ ಪಂಚಾಯತ್, ಕಾರ್ಯಾಲಯ, ಶಿವಮೊಗ್ಗ.

ಅಂಚೆ ಪೆಟ್ಟಿಗೆ ಸಂಖ್ಯೆ 127, ಕುವೆಂಪುರಸ್ತೆ, ಶಿವಮೊಗ್ಗ. 577201

================================================================

**ಜಿಪಂ ಶಿ/ ಅಭಿ (4) ವಿವ -13 /2026-27** **ದಿನಾಂಕ: 27 -08-2026**

**:: ನೇಮಕಾತಿ ಅಧಿಸೂಚನೆ ::**

ವಿಷಯ ಶಿವಮೊಗ್ಗ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಕರವಸೂಲಿಗಾರ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಕುರಿತು.

ಉಲ್ಲೇಖ
1. ಸರ್ಕಾರದ ಅಧಿಸೂಚನೆ ಸಂಖ್ಯೆ.ಗ್ರಾಅಪ 886 ಗ್ರಾಪಂಕಾ 2016 ದಿನಾಂಕ:29-09-2020.
2. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಪತ್ರ ಸಂ.ಕೆ.ಪಿ.ಆರ್.ಸಿ-ಜಿಪಿಎ/134/2024 ದಿ:26-06-2024 ಹಾಗೂ ಕೆ.ಪಿ.ಆರ್.ಸಿ-ಜಿಪಿಎ/136/2025 ಡಿಡಿ-1 ದಿ:12-08-2026.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:14/08/2026ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿಯನ್ವಯ

*******

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, ನಿಯಮಗಳನ್ವಯ ಶಿವಮೊಗ್ಗ ಜಿಲ್ಲಾ ಪಂಚಾಯುತ್ ವ್ಯಾಪ್ತಿಯ 07 ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಈ ಕೆಳಗಿನ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಗಳನ್ನು ಆಹ್ವಾನಿಸಿದೆ.

**ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ**

| ಕ್ರ.ಸಂ. | ಹುದ್ದೆಗಳ ಹೆಸರು | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 1 | ಕರವಸೂಲಿಗಾರ (ಬಿಲ್‌ಕಲೆಕ್ಟರ್) | 21 |
| 2 | ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ | 31 |
| | **ಒಟ್ಟು ಹುದ್ದೆಗಳು** | **52** |

**ಹುದ್ದೆಗಳ ವರ್ಗೀಕರಣ (ಕರವಸೂಲಿಗಾರ)**

| ಕ್ರ. ಸಂ | ಗ್ರಾಮ ಪಂಚಾಯಿತಿ ಹೆಸರು | ತಾಲ್ಲೂಕು ಹೆಸರು | ಮೀಸಲಾತಿ |
|---|---|---|---|
| 1 | ಹರಿದ್ರಾವತಿ | ಹೊಸನಗರ | ಪರಿಶಿಷ್ಟ ಜಾತಿ - ಪ್ರ –ಎ(ಇತರೆ) |
| 2 | ಅಗಸವಳ್ಳಿ | ಶಿವಮೊಗ್ಗ | ಸಾಮಾನ್ಯ -ಇತರೆ |
| 3 | ಹುಂಚದಕಟ್ಟೆ | ತೀರ್ಥಹಳ್ಳಿ | ಪರಿಶಿಷ್ಟ ಪಂಗಡ-ಇತರೆ |
| 4 | ದೊಡ್ಡೇರಿ | ಭದ್ರಾವತಿ | ಸಾಮಾನ್ಯ -ಮಹಿಳೆ |
| 5 | ಬೆಳ್ಳೂರು | ಹೊಸನಗರ | ಪ್ರವರ್ಗ -1-ಇತರೆ |
| 6 | ಹಿತ್ತಲ | ಶಿಕಾರಿಪುರ | ಸಾಮಾನ್ಯ - ಗ್ರಾಮೀಣ |
| 7 | ಮೇಲಿನಹನಸವಾಡಿ | ಶಿವಮೊಗ್ಗ | ಪ್ರವರ್ಗ -2ಎ -ಇತರೆ |
| 8 | ತೂದೂರು | ತೀರ್ಥಹಳ್ಳಿ | ಸಾಮಾನ್ಯ -ಅಂಗವಿಕಲ |
| 9 | ಬೆನ್ನೂರು | ಸೊರಬ | ಪರಿಶಿಷ್ಟ .ಜಾತಿ -ಪ್ರ –ಬಿ (ಇತರೆ) |
| 10 | ಶೇಡ್ಗಾರ್ | ತೀರ್ಥಹಳ್ಳಿ | ಸಾಮಾನ್ಯ -ಮಹಿಳೆ |
| 11 | ದೊಣಬಘಟ್ಟ | ಭದ್ರಾವತಿ | ಪ್ರವರ್ಗ -2ಬಿ-ಇತರೆ |
| 12 | ಬಾಳೂರು | ಹೊಸನಗರ | ಸಾಮಾನ್ಯ -ಗ್ರಾಮೀಣ |
| 13 | ರಾಮಚಂದ್ರಾಪುರ | ಹೊಸನಗರ | ಪ್ರವರ್ಗ -2ಎ-ಮಹಿಳೆ |
| 14 | ಕಾಗೆಕೋಡಮಗ್ಗೆ | ಭದ್ರಾವತಿ | ಸಾಮಾನ್ಯ -ಇತರೆ |

..2

| | | | |
|---|---|---|---|
| 15 | ಸಿಂಗನಮನೆ | ಭದ್ರಾವತಿ | ಪರಿಶಿಷ್ಟ .ಜಾತಿ -ಪ್ರ –ಸಿ (ಇತರೆ) |
| 16 | ಶಿರಿವಂತೆ | ಸಾಗರ | ಸಾಮಾನ್ಯ -ಮಹಿಳೆ |
| 17 | ತಮ್ಮಡಿಹಳ್ಳಿ | ಶಿವಮೊಗ್ಗ | ಪ್ರವರ್ಗ -3ಎ-ಇತರೆ |
| 18 | ಕೂಡ್ಲಿಗೆರೆ | ಭದ್ರಾವತಿ | ಸಾಮಾನ್ಯ -ಗ್ರಾಮೀಣ |
| 19 | ಮತ್ತೂರು | ಶಿವಮೊಗ್ಗ | ಪ್ರವರ್ಗ -3ಬಿ-ಇತರೆ |
| 20 | ಮಾವಿನಕೆರೆ | ಭದ್ರಾವತಿ | ಸಾಮಾನ್ಯ -ಮಾಜಿ ಸೈನಿಕ |
| 21 | ಹಾರೂಗುಳಿಗೆ | ತೀರ್ಥಹಳ್ಳಿ | ಪ್ರವರ್ಗ -2ಎ- ಗ್ರಾಮೀಣ |

**ಹುದ್ದೆಗಳ ವರ್ಗೀಕರಣ (ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್)**

| ಕ್ರ. ಸಂ | ಗ್ರಾಮ ಪಂಚಾಯಿತಿ ಹೆಸರು | ತಾಲ್ಲೂಕು ಹೆಸರು | ಮೀಸಲಾತಿ |
|---|---|---|---|
| 1 | ಕಾಗಿನಲ್ಲಿ | ಶಿಕಾರಿಪುರ | ಪರಿಶಿಷ್ಟ .ಜಾತಿ -ಪ್ರವರ್ಗ–ಎ (ಇತರೆ) |
| 2 | ಮುಂಬಾರು | ಹೊಸನಗರ | ಸಾಮಾನ್ಯ -ಇತರೆ |
| 3 | ಶಕುನವಳ್ಳಿ | ಸೊರಬ | ಪರಿಶಿಷ್ಟ ಪಂಗಡ-ಇತರೆ |
| 4 | ಆನವೇರಿ | ಭದ್ರಾವತಿ | ಸಾಮಾನ್ಯ -ಮಹಿಳೆ |
| 5 | ಸುಣ್ಣದಕೊಪ್ಪ | ಶಿಕಾರಿಪುರ | ಪ್ರವರ್ಗ -1-ಇತರೆ |
| 6 | ಮುಡುಬ ಸಿದ್ದಾಪುರ | ಶಿಕಾರಿಪುರ | ಸಾಮಾನ್ಯ -ಗ್ರಾಮೀಣ |
| 7 | ಕೂಡ್ಲಿಗೆರೆ | ಭದ್ರಾವತಿ | ಪ್ರವರ್ಗ -2ಎ-ಇತರೆ |
| 8 | ಅರಬಿಳಚಿ | ಭದ್ರಾವತಿ | ಸಾಮಾನ್ಯ -ಅಂಗವಿಕಲ |
| 9 | ಆಯನೂರು | ಶಿವಮೊಗ್ಗ | ಪರಿಶಿಷ್ಟ .ಜಾತಿ -ಪ್ರವರ್ಗ–ಬಿ (ಇತರೆ) |
| 10 | ಭಗನಕಟ್ಟೆ | ಶಿಕಾರಿಪುರ | ಸಾಮಾನ್ಯ -ಮಹಿಳೆ |
| 11 | ವೀರಾಪುರ | ಭದ್ರಾವತಿ | ಪ್ರವರ್ಗ -2ಬಿ-ಇತರೆ |
| 12 | ಹೊಸೂರು | ಶಿಕಾರಿಪುರ | ಸಾಮಾನ್ಯ -ಗ್ರಾಮೀಣ |
| 13 | ದೊಣಬಘಟ್ಟ | ಭದ್ರಾವತಿ | ಪ್ರವರ್ಗ -2ಎ-ಮಹಿಳೆ |
| 14 | ಶಿಗ್ಗಾ | ಸೊರಬ | ಸಾಮಾನ್ಯ -ಇತರೆ |
| 15 | ಹೊದಲ ಹರಳಾಪುರ | ತೀರ್ಥಹಳ್ಳಿ | ಪರಿಶಿಷ್ಟ .ಜಾತಿ -ಪ್ರವರ್ಗ –ಸಿ (ಇತರೆ) |
| 16 | ತಾಳಗುಂದ | ಶಿಕಾರಿಪುರ | ಸಾಮಾನ್ಯ -ಮಹಿಳೆ |
| 17 | ತುಪ್ಪೂರು | ಶಿವಮೊಗ್ಗ | ಪ್ರವರ್ಗ -3ಎ-ಇತರೆ |
| 18 | ಸಾಲೂರು | ಶಿಕಾರಿಪುರ | ಸಾಮಾನ್ಯ -ಗ್ರಾಮೀಣ |
| 19 | ಮೇಲಿನಹನಸವಾಡಿ | ಶಿವಮೊಗ್ಗ | ಪ್ರವರ್ಗ -3ಬಿ-ಇತರೆ |
| 20 | ಚಿಕ್ಕಮಾಗಡಿ | ಶಿಕಾರಿಪುರ | ಸಾಮಾನ್ಯ -ಮಾಜಿ ಸೈನಿಕ |
| 21 | ದ್ಯಾವನಹಳ್ಳಿ | ಸೊರಬ | ಪ್ರವರ್ಗ -2ಎ-ಗ್ರಾಮೀಣ |
| 22 | ಬಾಳೂರು | ಹೊಸನಗರ | ಸಾಮಾನ್ಯ -ಮಹಿಳೆ |
| 23 | ಅರಳಿಹಳ್ಳಿ | ಭದ್ರಾವತಿ | ಪರಿಶಿಷ್ಟ .ಜಾತಿ -ಪ್ರವರ್ಗ–ಎ (ಮಹಿಳೆ) |
| 24 | ಆವಿನಹಳ್ಳಿ | ಸಾಗರ | ಸಾಮಾನ್ಯ -ಮಹಿಳೆ |
| 25 | ಅಂಬಾರಗೊಪ್ಪ | ಶಿಕಾರಿಪುರ | ಪ್ರವರ್ಗ -2ಎ-ಅಂಗವಿಕಲ |
| 26 | ಕಾರೇಹಳ್ಳಿ | ಭದ್ರಾವತಿ | ಸಾಮಾನ್ಯ -ಗ್ರಾಮೀಣ |
| 27 | ಬಾರಂದೂರು | ಭದ್ರಾವತಿ | ಪರಿಶಿಷ್ಟ .ಜಾತಿ -ಪ್ರವರ್ಗ–ಬಿ (ಮಹಿಳೆ) |
| 28 | ಸಿಂಗನಮನೆ | ಭದ್ರಾವತಿ | ಸಾಮಾನ್ಯ -ಕನ್ನಡ ಮಾದ್ಯಮ |
| 29 | ಹರಿಗಿ | ಶಿಕಾರಿಪುರ | ಪ್ರವರ್ಗ -2ಎ-ಮಹಿಳೆ |
| 30 | ನಿಧಿಗೆ | ಶಿವಮೊಗ್ಗ | ಸಾಮಾನ್ಯ -ಮಹಿಳೆ |
| 31 | ತಮ್ಮಡಿಹಳ್ಳಿ | ಶಿವಮೊಗ್ಗ | ಪ್ರವರ್ಗ -1-ಮಹಿಳೆ |

**1. ಶೈಕ್ಷಣಿಕ ವಿದ್ಯಾರ್ಹತೆ:**

ಅರ್ಜಿಗಳನ್ನು ಆಹ್ವಾನಿಸಿದ ಕೊನೆಯ ದಿನಾಂಕದಂದು ಈ ಕೆಳಗೆ ನಮೂದಿಸಿರುವ ಕೋಷ್ಟಕದಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಬೇಕು.

...3

## ಹುದ್ದೆ: ಕರವಸೂಲಿಗಾರ: -

| ನಿಗಧಿಪಡಿಸಿದ ವಿದ್ಯಾರ್ಹತೆ | ಆಯ್ಕೆ ವಿಧಾನ |
|---|---|
| 1a ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ದ್ವಿತೀಯ ಪಿ.ಯು.ಸಿಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ<br>1b ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಸಿ.ಬಿ.ಎಸ್.ಸಿ 12ನೇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ<br>1c ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಐ.ಎಸ್.ಸಿ. ಮಂಡಳಿಯು ನಡೆಸುವ 12ನೇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು . ಅಥವಾ<br>1d ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಇತರೆ ರಾಜ್ಯದ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ನೇ ಪರೀಕ್ಷೆ ತೇರ್ಗಡೆಯಾಗಿರಬೇಕು. ಅಥವಾ<br>1e ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.ಯಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ<br>1f ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಮೂರು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ(ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್ ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ(ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಬಹುದು.<br>2a ಕಂಪ್ಯೂಟರ್ ತರಬೇತಿ ಕೋರ್ಸ್‌ನಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಸಂಸ್ಥೆಯಿಂದ 03 ತಿಂಗಳ ತರಬೇತಿ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು<br>(ಖಾಸಗಿ ಸಂಸ್ಥೆಯಿಂದ ಕಂಪ್ಯೂಟರ್ ಪ್ರಮಾಣ ಪತ್ರ ಪಡೆದಿದ್ದಲ್ಲಿ ಸಂಸ್ಥೆಯು ಸರ್ಕಾರದಿಂದ ಮಾನ್ಯತೆ ಪಡೆದಿರುವ ಪ್ರಮಾಣ ಪತ್ರವನ್ನು(Government recognised certificate) ಹಾಜರು ಪಡಿಸುವುದು) | ನೇಮಕಾತಿಗೆ ನಿಗಧಿಪಡಿಸಿದ ವಿದ್ಯಾರ್ಹತೆಯಾದ 1a ಅಥವಾ 1b ಅಥವಾ 1c ಅಥವಾ 1d ಅಥವಾ 1e ಅಥವಾ 1f ನಲ್ಲಿ ಗಳಿಸಿದ ಗರಿಷ್ಠ ಅಂಕಗಳು/ಮೆರಿಟ್ ಆಧಾರದ ಮೇಲೆ ಆಯ್ಕೆ ಪಟ್ಟಿ ತಯಾರಿಸಲಾಗುತ್ತದೆ.<br>( ಕಡ್ಡಾಯವಾಗಿ ಅಭ್ಯರ್ಥಿಯು 2 a ನಲ್ಲಿ ತಿಳಿಸಿರುವ ಕಂಪ್ಯೂಟರ್ ವಿದ್ಯಾರ್ಹತೆಯನ್ನು ಹೊಂದಿರಬೇಕು) |

## ಹುದ್ದೆ: ಕ್ಲರ್ಕ್ ಕಂ-ಡಾಟಾ ಎಂಟ್ರಿ ಆಪರೇಟರ್.

| ನಿಗದಿಪಡಿಸಿದ ವಿದ್ಯಾರ್ಹತೆ | ಆಯ್ಕೆ ವಿಧಾನ |
|---|---|
| 1a ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ದ್ವಿತೀಯ ಪಿ.ಯು.ಸಿಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ<br>1b ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಸಿ.ಬಿ.ಎಸ್.ಸಿ 12ನೇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ<br>1c ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಐ.ಎಸ್.ಸಿ. ಮಂಡಳಿಯು ನಡೆಸುವ 12ನೇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು . ಅಥವಾ<br>1d ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಇತರೆ ರಾಜ್ಯದ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ನೇ ಪರೀಕ್ಷೆ ತೇರ್ಗಡೆಯಾಗಿರಬೇಕು. ಅಥವಾ<br>1e ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.ಯಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ<br>1f ಕನ್ನಡವನ್ನು ಒಂದು ಭಾಷೆಯನ್ನಾಗಿ ಅಭ್ಯಾಸಿಸಿ ಮೂರು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ(ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್ ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ(ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಬಹುದು.<br>2a ಕಂಪ್ಯೂಟರ್ ತರಬೇತಿ ಕೋರ್ಸ್‌ನಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಸಂಸ್ಥೆಯಿಂದ 06 ತಿಂಗಳ ತರಬೇತಿ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು. (ಖಾಸಗಿ ಸಂಸ್ಥೆಯಿಂದ ಕಂಪ್ಯೂಟರ್ ಪ್ರಮಾಣ ಪತ್ರ ಪಡೆದಿದ್ದಲ್ಲಿ ಸಂಸ್ಥೆಯು ಸರ್ಕಾರದಿಂದ ಮಾನ್ಯತೆ ಪಡೆದಿರುವ ಪ್ರಮಾಣ ಪತ್ರವನ್ನು (Government Recognised certificate) ಹಾಜರು ಪಡಿಸುವುದು) | ನೇಮಕಾತಿಗೆ ನಿಗದಿಪಡಿಸಿದ ವಿದ್ಯಾರ್ಹತೆ ಯಾದ 1a ಅಥವಾ 1b ಅಥವಾ 1c ಅಥವಾ 1d ಅಥವಾ 1e ಅಥವಾ 1f ನಲ್ಲಿ ಗಳಿಸಿದ ಅಂಕಗಳ 50% ರಷ್ಟು ಹಾಗೂ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನಡೆಸಿ ಆ ಅರ್ಹತಾ ಪರೀಕ್ಷೆಯಲ್ಲಿ ಪಡೆದ 50% ರಷ್ಟು ಅಂಕಗಳನ್ನು ಒಳಗೊಂಡಿರುವ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.<br>(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯ ವೇಳಾ ಪಟ್ಟಿಯನ್ನು ನಂತರದಲ್ಲಿ ದೂರವಾಣಿ ಅಥವಾ ಇ-ಮೇಲ್ ಮೂಲಕ ಅಭ್ಯರ್ಥಿಗಳಿಗೆ ತಿಳಿಸಲಾಗುವುದು) |

## 2. ವಾಸಸ್ಥಳ ಅರ್ಹತೆ: -

ಈ ಮೇಲ್ಕಂಡ ಹುದ್ದೆಗಳು ಯಾವ ಗ್ರಾಮ ಪಂಚಾಯಿತಿಯಲ್ಲಿ ಖಾಲಿ ಇದೆಯೋ ಆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದ ವಾಸ ಸ್ಥಳ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದು ಸಲ್ಲಿಸತಕ್ಕದ್ದು.

### 3.ವಯೋಮಿತಿ :

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿಗಳು) ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 18 ವರ್ಷ ವಯಸ್ಸನ್ನು ತುಂಬಿರತಕ್ಕದ್ದು, ಹಾಗೂ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 262 ಸೇನೆನಿ 2025 ದಿನಾಂಕ:29-01-2026 ರಲ್ಲಿ ಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 05 ವರ್ಷಗಳ ಸಡಿಲಿಕೆ ನೀಡಿದ್ದು, ಈ ಹಿನ್ನಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರರಬಾರದು.

| | | |
|---|---|---|
| ಎ | ಸಾಮಾನ್ಯ ವರ್ಗ | 40 ವರ್ಷ |
| ಬಿ | ಪ್ರವರ್ಗ – 2ಎ, 2ಬಿ. 3ಎ ಮತ್ತು 3ಬಿ | 43 ವರ್ಷ |
| ಸಿ | ಪ.ಜಾತಿ/ಪ.ಪಂ/ಪ್ರವರ್ಗ-1 | 45 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ಧಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| 1 | ಮಾಜಿ ಸೈನಿಕರಾಗಿದ್ದಲ್ಲಿ | ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ ಅವರ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು |
| 2 | ವಿಶೇಷ ಚೇತನ /ವಿಧವೆ/ ಜೀತಕಾರ್ಮಿಕ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಹೊಂದಿರತಕ್ಕದ್ದು) | 10 ರ್ಷಗಳು |

### 4. ಅರ್ಜಿ ಸಲ್ಲಿಸುವ ವಿಧಾನ ಮತ್ತು ವೇಳಾಪಟ್ಟಿ:

Website https://shivamogga.nic.in ನಲ್ಲಿ ಅರ್ಜಿಯನ್ನು download ಮಾಡಿಕೊಂಡು ಭರ್ತಿ ಮಾಡಿ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸುವುದು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರ ಹೆಸರಿಗೆ ಡಿ.ಡಿ ಪಡೆದು ಡಿ.ಡಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ, ಖುದ್ದಾಗಿ ಸಂಬಂದಪಟ್ಟ ಗ್ರಾಮ ಪಂಚಾಯತಿಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಲ್ಲಿಸಿ ಸ್ವೀಕೃತಿಯನ್ನು ಪಡೆದಿಟ್ಟುಕೊಳ್ಳತಕ್ಕದ್ದು, ದಾಖಲಾತಿ ಪರಿಶೀಲನಾ ಸಮಯದಲ್ಲಿ ಸ್ವೀಕೃತಿಯನ್ನು ಹಾಜರುಪಡಿಸುವುದು. ಡಿ.ಡಿ. ಸಲ್ಲಿಸದೇ ಇದ್ದಲ್ಲಿ ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

| | |
|---|---|
| ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | ದಿನಾಂಕ: 27-08-2026 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ದಿನಾಂಕ: 25-09-2026 |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | ದಿನಾಂಕ: 25-09-2026 |

**ಅರ್ಜಿ ಶುಲ್ಕ:**

| ವಿವರಗಳು | ಶುಲ್ಕ | ಷರಾ |
|---|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ | 50/- | ಪಾವತಿಸಿದ ಶುಲ್ಕವನ್ನುಹಿಂದಿರುಗಿಸಲಾಗುವುದಿಲ್ಲ |
| ಇತರೆ ಅಭ್ಯರ್ಥಿಗಳು | 100/- | |
| **"ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ"** ರವರ ಹೆಸರಿಗೆ ಡಿ.ಡಿಯನ್ನು ಪಡೆದು ಅರ್ಜಿಯೊಂದಿಗೆ ಆಯಾ ಗ್ರಾಮ ಪಂಚಾಯಿತಿಯಲ್ಲಿ **ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ** ಸಲ್ಲಿಸತಕ್ಕದ್ದು. | | |

## 5.ವೇತನ:

ಸರ್ಕಾರದಿಂದ ನಿಗಧಿಪಡಿಸಿದ ವೇತನ.

## 6. ಸಲ್ಲಿಸಬೇಕಾದ ದಾಖಲೆಗಳು

a) ಜಾತಿ/ ಮೀಸಲಾತಿ ಪ್ರಮಾಣ ಪತ್ರಗಳು:

ಮೀಸಲಾತಿ ಕೋರಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು;

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1. | ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ) ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ 'ಡಿ' ಪ್ರಮಾಣ ಪತ್ರ.<br>ಪ್ರವರ್ಗ-1 ಸೇರಿದ ಅಭ್ಯರ್ಥಿಗಳು - ನಮೂನೆ 'ಇ'<br>ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. |
| ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ | ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - ನಮೂನೆ 'ಎಫ್'.<br>ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.<br>**ವಿಶೇಷ ಸೂಚನೆ:-** ಸರ್ಕಾರದ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರನ್ವಯ ಬಲಿಜ ಮತ್ತು ಉಪ ಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗ ಬಲಿಜ / ತೆಲಗ ಬಣಜಿಗ / ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ / ಬಣಜಿಗ ಶೆಟ್ಟಿ, ದಾಸರ ಬಲಿಜ / ದಾಸರ ಬಲಜಿಗ /ದಾಸರ ಬಣಜಿಗ / ದಾಸಬಣಜಿಗ, ಕಸ್ಬನ್ಸ್, ಮುನ್ನೂರ / ಮುನ್ನಾರ್ / ಮುನ್ನೂ ಕಾಪು, ಬಳಿಗಾರ /ಬಳೆ ಬಣಜಿಗ / ಬಳೆಬಲಜಿಗ / ಬಳಿ ಜೆಟ್ಟಿ / ಬಣಗಾರ, ರೆಡ್ಡಿ (ಬಲಿಜ), ಜನಪ್ಪನ್, ಉಪ್ಪಾರ(ಬಲಿಜ), ತುಲೇರು(ಬಲಿಜ) ಉಪ ಜಾತಿಗಳನ್ನು ಶಿಕ್ಷಣದ ಸಲುವಾಗಿ 2ಎ ಮೀಸಲಾತಿಯಡಿ ಹಾಗೂ ಉದ್ಯೋಗದ ಸಲುವಾಗಿ 3ಎ ಮೀಸಲಾತಿಯಡಿ ಪರಿಗಣಿಲಾಗಿದೆ. ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ /ಉಪಜಾತಿಯ ಅಭ್ಯರ್ಥಿಗಳು ಉದ್ಯೋಗದಲ್ಲಿನ ಮೀಸಲಾತಿಗಾಗಿ ಕಡ್ಡಾಯವಾಗಿ 3ಎ ಮೀಸಲಾತಿ ಕೋರತಕ್ಕದ್ದು ಹಾಗೂ ಶಿಕ್ಷಣದ ಸಲುವಾಗಿ ಪಡೆದ 2ಎ ಮೀಸಲಾತಿ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ.<br>(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು). |

| | |
|---|---|
| ಗ್ರಾಮೀಣ ಅಭ್ಯರ್ಥಿ: | ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನನಿ 2001 ದಿನಾಂಕ 13-02-2001 ರನ್ವಯ ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.<br>ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. |
| ಕನ್ನಡ ಮಾಧ್ಯಮ ಅಭ್ಯರ್ಥಿ: | ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನನಿ 2001 ದಿನಾಂಕ 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ರದ್ದುಪಡಿಸಲಾಗುವುದು. |

..8

| | |
|---|---|
| ಮಾಜಿ ಸೈನಿಕ: | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 28 ಎಸ್‌ಆರ್‌ಆರ್ 95 ದಿ:21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡಾ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಿಡಲಾಗಿದೆ. ಕರ್ನಾಟಕ. ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ<br>**ವಿವರಣೆ ಕೆಳಕಂಡಂತಿದೆ:**<br>1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು<br>2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.<br>3. ಅ). ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು;<br>ಅಥವಾ<br>ಆ). ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು<br>ಅಥವಾ<br>ಇ). ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿಗಳು.<br>ಅಥವಾ<br>ಈ). ತಮ್ಮ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿಗಳು ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿಗಳು ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-<br>i. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.<br>ii. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿಗಳು.<br>iii. ಶೌರ್ಯ (ಗ್ಯಾಲಂಟ್ರಿ) ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ. |

| | |
|---|---|
| | ವಿವರಣೆ: ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ). |
| ವಿಶೇಷ ಚೇತನ ಅಭ್ಯರ್ಥಿಗಳಿಗೆ: | ಸರ್ಕಾರದ ಅಧಿಸೂಚನೆ ಸಂಖ್ಯೆ: WCD 213 PHP 2023, ದಿನಾಂಕ: 06.02.2024 ರಂತೆ ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು(ಅಂಧತ್ವ ಮತ್ತು ಮಂದ ದೃಷ್ಟಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುವುದಿಲ್ಲ). ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನೆನಿ/2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರದಿಂದ/ UDID ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.<br>ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ನೇಮಕಾತಿ ಪ್ರಾಧಿಕಾರವು ಅವಶ್ಯವಿದ್ದಲ್ಲಿ ವೈದ್ಯಕೀಯ ಮಂಡಳಿಯ ಪರಿಶೀಲನೆಗೆ ಒಳಪಡಿಸಲಾಗುತ್ತದೆ. |

**7.ಪ್ರಮುಖ ಸೂಚನೆಗಳು:**

ಈ ಕೆಳಕಂಡ ದಾಖಲೆ/ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯ ಅರ್ಜಿಯಲ್ಲಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೆ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.**

1. ಆಧಾರ್‌ಕಾರ್ಡ್.
2. ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
3. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿಗಳು.
4. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
5. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ ಮಾಜಿ ಸೈನಿಕರು

ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disbaled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

6. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಗದಿತ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ).
7. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ನಮೂನೆ-1 ರಲ್ಲಿ ಮಾತ್ರ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
8. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯ ಲಿಂಗದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)
10. ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು (ನಿಗದಿಪಡಿಸಿದ್ದಲ್ಲಿ). )
11. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ).
12. ಈ ಮೇಲ್ಕಂಡ ಹುದ್ದೆಗಳು ಯಾವ ಗ್ರಾಮ ಪಂಚಾಯಿತಿಯಲ್ಲಿ ಖಾಲಿ ಇದೆಯೋ ಆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದ ವಾಸ ಸ್ಥಳ ದೃಡೀಕರಣ ಪತ್ರವನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದು ಸಲ್ಲಿಸತಕ್ಕದ್ದು.
13. ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗಧಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.
14. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
15. ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ).
16. ಕರವಸೂಲಿಗಾರರ ಹುದ್ದೆಗೆ 3 ತಿಂಗಳು ಕಂಪ್ಯೂಟರ್ ತರಬೇತಿ ಪ್ರಮಾಣ ಪತ್ರ ಹಾಗೂ ಕ್ಲರ್ಕ್ ಕಂ- ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ 6 ತಿಂಗಳ ಕಂಪ್ಯೂಟರ್ ತರಬೇತಿ ಪ್ರಮಾಣ ಪತ್ರ ಹಾಜರುಪಡಿಸುವುದು ಕಡ್ಡಾಯವಾಗಿದ್ದು, ಕಂಪ್ಯೂಟರ್ ಪ್ರಮಾಣ ಪತ್ರದಲ್ಲಿ ಕೋರ್ಸ್ ಅವಧಿಯು ನಮೂದಾಗಿರತಕ್ಕದ್ದು. ಒಂದು ವೇಳೆ ಅವಧಿ ನಮೂದಾಗಿರದಿದ್ದಲ್ಲಿ ಅಂತಹ ಅಭ್ಯರ್ಥಿಯನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

**8. ವಿಶೇಷ ಸೂಚನೆಗಳು :**

1. ಭಾರತೀಯ ನಾಗರೀಕನಾಗಿರಬೇಕು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು ಹಾಗೂ ಶುಲ್ಕ ಪಾವತಿಯ ಡಿ.ಡಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ, ಗ್ರಾಮ ಪಂಚಾಯಿತಿಗೆ ಸಲ್ಲಿಸಿ ಸ್ವೀಕೃತಿಯನ್ನು ಪಡೆದಿಟ್ಟುಕೊಳ್ಳತಕ್ಕದ್ದು, ದಾಖಲಾತಿ ಪರಿಶೀಲನಾ ಸಮಯದಲ್ಲಿ ಸ್ವೀಕೃತಿಯನ್ನು ಹಾಜರುಪಡಿಸುವುದು.
3. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ /ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ

ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅವರನ್ನು ಅನರ್ಹಗೊಳಿಸಲಾಗುವುದು.

4. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್‌ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
5. ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.
6. ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ ಹಾಗೂ ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
7. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.
8. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೇ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.
9. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.
10. ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲೆಯನ್ನು ರೋಷ್ಟರ್ ಬಿಂದುಗಾಗಿ ಒಂದು ಯುನಿಟ್ ಎಂದು ಪರಿಗಣಿಸಿ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಯನುಸಾರ ಕ್ರಮ ವಹಿಸುವ ಷರತ್ತಿಗೊಳಪಟ್ಟಿರುತ್ತದೆ.
11. ಸದ್ರಿ ಹುದ್ದೆಗಳಿಗೆ ನೇಮಕಗೊಳ್ಳುವವರು ಗ್ರಾಮ ಪಂಚಾಯತಿಯ ನೌಕರರಾಗಿರುತ್ತಾರೆ ವಿನಃ ಸರಕಾರಿ ನೌಕರರಾಗಿರುವುದಿಲ್ಲ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 112 ಮತ್ತು 113 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ/886/ಗ್ರಾಪಂಕಾ/2016 ದಿನಾಂಕ: 29.09.2020ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರ ಸೇವಾ ಷರತ್ತುಗಳು) ನಿಯಮಗಳು, 2020ರ ನಿಯಮಗಳು ಸದ್ರಿ ನೌಕರರಿಗೆ ಅನ್ವಯಿಸುತ್ತದೆ.
12. ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
13. ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮ ದಾಖಲಿಸಲಾಗುವುದು.
14. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
15. ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
16. ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟಿರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

17. ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಇ-ಮೇಲ್ ಮತ್ತು ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
18. ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

**9. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸ ಬೇಕಾದ ದೂರವಾಣಿ ಸಂಖ್ಯೆ:- 08182-267243 ಮತ್ತು ಇ-ಮೇಲ್ ವಿಳಾಸ: zpshmds2@gmail.com**

ಅಧ್ಯಕ್ಷರು ಗ್ರಾಮ ಪಂಚಾಯಿತಿ ಸಿಬ್ಬಂದಿ
ಆಯ್ಕೆ ಸಮಿತಿ ಹಾಗೂ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಜಿಲ್ಲಾ ಪಂಚಾಯತ್, ಶಿವಮೊಗ್ಗ

ದಿನಾಂಕ: 21/08/26

**ಪ್ರತಿಯನ್ನು :**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಇವರಿಗೆ ಮಾಹಿಗಾಗಿ ಸಲ್ಲಿಸಿದೆ.
3. ಜಿಲ್ಲಾ, ಸೂಚನಾ ವಿಜ್ಞಾನಾಧಿಕಾರಿಗಳು, ಶಿವಮೊಗ್ಗರವರಿಗೆ http://shivamogga.nic.in ರ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ
4. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ- ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಅಧಿಸೂಚನೆಯನ್ನು ಗ್ರಾಮ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಪಡಿಸುವುದು ಹಾಗೂ ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸುವುದು ಹಾಗೂ ಸ್ವೀಕೃತಿ ನೀಡುವುದು. ಕೊನೆಯ ದಿನಾಂಕದಂದು ಸಂಜೆ 5.30ವರೆಗೆ ಸ್ವೀಕೃತವಾದ ಅರ್ಜಿಯ ಮಾಹಿತಿಯನ್ನು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ, ಸ್ವೀಕೃತವಾದ ಅರ್ಜಿಗಳನ್ನು ಆಯಾ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸುವುದು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸತಕ್ಕದ್ದಲ್ಲ.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್, ಶಿವಮೊಗ್ಗ/ಭದ್ರಾವತಿ/ ತೀರ್ಥಹಳ್ಳಿ/ ಹೊಸನಗರ/ ಸಾಗರ/ ಸೊರಬ/ ಶಿಕಾರಿಪುರ ರವರ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಂದ ಸ್ವೀಕೃತವಾದ ನಮೂನೆಯನ್ನು ಕ್ರೂಡಿಕರಿಸಿ, ಹಾಗೂ ಸ್ವೀಕೃತವಾದ ಅರ್ಜಿಗಳೊಂದಿಗೆ ಖುದ್ದಾಗಿ ಜಿಲ್ಲಾ ಪಂಚಾಯತ್‌ಗೆ ಸಲ್ಲಿಸುವುದು.

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ – ಡಿ** (ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .............................................. ಜಿಲ್ಲೆಯ / ವಿಭಾಗದ ............................................................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ............................................ ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ........................................... ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ /ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

◆ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

◆ಸಂವಿಧಾನ

◆ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

◆ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

◆ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

◆ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

◆ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988

◆ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು .......................................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................................... ಜಿಲ್ಲಾ / ವಿಭಾಗದ ............................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ...........................................................

ತಹಶೀಲ್ದಾರ್..........................................

ಸ್ಥಳ:

ಪದನಾಮ

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ. ಭಾರತ ಸರ್ಕಾರದ ಪತ್ರಸಂಖ್ಯೆ: ಜಿಸಿ 12028/2/76–ಎಸ್‌ಸಿಟಿ–I ಗೃಹ ಮಂತ್ರಾಲಯ ಅನುಸಾರವಾಗಿ, ಅಂಥಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ** – ಇ (ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ /

ನಗರ ನಿವಾಸಿಯಾದ ಶ್ರೀ / ಶ್ರೀಮತಿ

ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ

ಇವರು ಹಿಂದುಳಿದ ವರ್ಗಗಳ (ಪ್ರವರ್ಗ)

ಜಾತಿಯ ಉಪ ಜಾತಿಗೆ

ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ: ತಾಲ್ಲೂಕು

ಕಛೇರಿಯ ಮೊಹರು

**ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್** (ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ /ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು; ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

**ಅಥವಾ**

ಆತನ /ಅಕೆಯ ತಂದೆತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ/ 304 / ಬಿಸಿಎ / 2017 ದಿನಾಂಕ. 14.09.2018);

**ಅಥವಾ**

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / --- / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ ಇವರು ಜಾತಿಗೆ ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ: ---- (ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ತಹಶೀಲ್ದಾರ್
---------- ತಾಲ್ಲೂಕು
ಕಛೇರಿಯ ಮೊಹರು

**ನಮೂನೆ – 1**

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

**ಮೇಲುಸ್ಥರಕ್ಕೆ ಸೇರಿಲ್ಲವೆಂದು ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

ದೃಢೀಕರಣ ಪತ್ರದ ಸಂಖ್ಯೆ : RD______________

ಕುಮಾರ್/ಕುಮಾರಿ ಬಿನ್ ಶ್ರೀ / ಶ್ರೀಮತಿ

ಇವರ ಮಗ /ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ರವರು

ಗ್ರಾಮ ಹೋಬಳಿ ಜಿಲ್ಲೆಯಲ್ಲಿ ವಾಸಿಗಳಾಗಿದ್ದು ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ: ಹಿಂವಕ 304 ಬಿಸಿಎ 2017 ದಿನಾಂಕ 14.09.2018 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು.

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ /ಅಕೆಯ ತಂದೆತಾಯಿ/ ಪೋಷಕರು /ಪತ್ನಿ /ಪತಿಯು ಆದಾಯ ತರಿಗೆದಾರನಲ್ಲ ಅಥವಾ ಸಂಪತ್ತು ತೆರಿಗೆದಾರನಲ್ಲವೆಂದು.

ಅಥವಾ

ಆತನ /ಅಕೆಯ ತಂದೆತಾಯಿ/ ಪೋಷಕರು /ಪತ್ನಿ /ಪತಿಯ ವಾರ್ಷಿಕ ಒಟ್ಟು ಆದಾಯ ರೂ. 8.00 ಲಕ್ಷ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ/ 304 / ಬಿಸಿಎ / 2017 ದಿನಾಂಕ. 14.09.2018);

ಅಥವಾ

ಆತನ /ಅಕೆಯ ತಂದೆತಾಯಿ/ ಪೋಷಕರು /ಪತ್ನಿ /ಪತಿಯು ಭೂಸುಧಾರಣಾ ಕಾಯ್ದೆ 1961 ರಲಿ ಅಡಿಯಲ್ಲಿ ನಿಗಧಿಪಡಿಸಿದ 10 ಯೂನಿಟ್ ಕೃಷಿ ಭೂಮಿಗಿಂತ ಹೆಚ್ಚು ಕೃಷಿ ಭೂಮಿ ಅಥವಾ ಪ್ಲಾಂಟೇಶನ್ ಬೆಳೆ ಬೆಳಯುವ ಭೂಮಿಗೆ ಸಂಬಂಧಿಸಿದಂತೆ 20 ಎಕರೆಗಿಂತ ಹೆಚ್ಚು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಿದೆ.

ಕುಮಾರ್/ಕುಮಾರಿ ಬಿನ್ ಇವರು ಮೇಲುಸ್ಥರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲ.

ಸದರಿ ದೃಢೀಕರಣ ಪತ್ರವು ಒಂದು ಚರ್ವದ ಅವಧಿಗೆ ಚಾಲ್ತಿಯಲ್ಲಿರುತ್ತದೆ.

ದಿನಾಂಕ:

ಟಿಪ್ಪಣಿ: ಈ ದೃಢೀಕರಣ ಪತ್ರವು ವಿದ್ಯುನ್ಮಾನ ಸಹಿಯನ್ನು ಹೊಂದಿದ್ದು, ಕೈ ಬರಹದ ಸಹಿಯ ಅವಶ್ಯಕತೆ ಇರುವುದಿಲ್ಲ

ತಹಸೀಲ್ದಾರ್/ ಉಪ ತಹಸೀಲ್ದಾರ್
ತಹಸೀಲ್ದಾರ್ ಕಛೇರಿಯ ಪೂರ್ಣ ವಿಳಾಸ

**ಕರ್ನಾಟಕ ಸರ್ಕಾರ**
**ಕಂದಾಯ ಇಲಾಖೆ**

# <u>ವಾಸಸ್ಥಳ ದೃಢೀಕರಣ ಪತ್ರ</u>

**ದೃಢೀಕರಣ ಪತ್ರದ ಸಂಖ್ಯೆ: RD**________________

ಶ್ರೀ/ಶ್ರೀಮತಿ/ಕುಮಾರಿ _______________ ಬಿನ್ ___________________(ತಂದೆಯ ಹೆಸರು) ಮತ್ತು ಬಿನ್ _____________________ (ತಾಯಿಯ ಹೆಸರು) ರವರು _____________________ ವಿಳಾಸ _______________________ ಗ್ರಾಮ/ವಾರ್ಡಿನ ______________ ಹೋಬಳಿ , _______________ ತಾಲ್ಲೂಕು , ________________ ಜಿಲ್ಲೆಯಲ್ಲಿ ವಾಸವಾಗಿದ್ದು, ಇವರು ಸದರಿ ವಿಳಾಸದಲ್ಲಿ ಸುಮಾರು _______ ವರ್ಷ ________ ತಿಂಗಳುಗಳಿಂದ ವಾಸವಾಗಿರುತ್ತಾರೆಂದು ದೃಢೀಕರಿಸಿದೆ.

ಈ ದೃಢೀಕರಣ ಪತ್ರವು ರದ್ದಾಗುವವರೆಗೂ ಮಾನ್ಯವಾಗಿರುತ್ತದೆ.

ದಿನಾಂಕ: _____________

ಟಿಪ್ಪಣಿ: ಈ ದೃಢೀಕರಣ ಪತ್ರವು ವಿದ್ಯುನ್ಮಾನ ಸಹಿಯನ್ನುಹೊಂದಿದ್ದು, ಕೈಬರಹದ ಸಹಿಯ ಅವಶ್ಯಕತೆ ಇರುವುದಿಲ್ಲ.

ದಯವಿಟ್ಟು ಈ ಪ್ರಮಾಣ ಪತ್ರದ ನೈಜನೆಯನ್ನು ಪರಿಶೀಲಿಸಲು ನಾಡಕಛೇರಿ ವೆಬ್ ಸೈಟ್ www.nadakacheri.karnataka.gov.in ಗೆ ಪ್ರವೇಶ ಹೊಂದಿ ಪ್ರಮಾಣ ಪತ್ರದ ಸಂಖ್ಯೆಯನ್ನು ನಮೂದಿಸುವುದು.

ಹೆಸರು:
ಉಪ ತಹಸೀಲ್ದಾರ್
_______ ಹೋಬಳಿ
________ ತಾಲ್ಲೂಕು
________ ಜಿಲ್ಲೆ.

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum ........................................................ son / wife / daughter of Shri ............................................... ........................ Age ............................ old, male / female, Registration No ................................ is a case of

........................... He / She is physically disabled/visual disabled/speech & hearing disabled and has ........................ % (........................percent) permanent (physical impairment visual impairment speech & hearing impairment) in relation to his / her ................................

Note:

1. This condition is progressive / non-progressive / likely to improve / not likely to improve. *

2. Re-assessment is not recommended/is recommended after a period of .................... months / years. *

* Strike out which is not applicable

(Recent Attested Photograph showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the

Medical Superintendent CMO / Head of Hospital (with seal)

Signature / Thumb impression
of the disabled person

Explanation:-As per Notification No. DPAR 149 SRR 2020 dated 25-09-2020 "Physically Handicapped candidates" or "person with disability" means a person suffering from not less than forty percent of any of the disabilities mentioned in the above said Governmetn rules.

(1) Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;

(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;

(3) Hearing impairment means loss of sixty decibels or more in the better ear in the conversational range of frequencies.

(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.

(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & pares is in the eye & eyelid, but with no manifest deformity;(ii) manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly;

(6) Mental Retardation:-means a condition of arrested or incomplete development of mind of a person who is specially characterised by sub normality of intelligence;

(7) Mental Illness:- means any mental disorder other than mental retardation.

# ದೃಢೀಕರಣ ಪತ್ರ

ವಿಷಯ : ಮಾಜಿ ಸೈನಿಕ ದೃಢೀಕರಣ/ಪ್ರಮಾಣ ಪತ್ರ ನೀಡುವ ಕುರಿತು

1. ನಂ ರ್‍ಯಾಂಕ್ ಹೆಸರು (ನಿವೃತ್ತ) ಇವರು ಸೇನೆಯಲ್ಲಿ ದಿನಾಂಕ ರಿಂದ ರವರೆಗೆ ವರ್ಷಗಳ ಸೇವೆಯನ್ನು ಸಲ್ಲಿಸಿ ನಿವೃತ್ತರಾಗಿರುತ್ತಾರೆ ಹಾಗೂ ಸದರಿಯವರು **"ಮಾಜಿ ಸೈನಿಕ ಪರಿಭಾಷೆ"**ಯಲ್ಲಿ ಬರುವುದರಿಂದ ಇವರಿಗೆ ಈ ಕಛೇರಿಯಿಂದ ಗಣತಿ ಗುರುತಿನ ಚೀಟಿ ಸಂಖ್ಯೆ ಕೆ.ಆರ್.ಟಿ– ಅನ್ನು ವಿತರಿಸಲಾಗಿರುತ್ತದೆ.

2. ಸದರಿಯವರ ಖಾಯಂ ವಿಳಾಸವು ಈ ಕಛೇರಿಯ ದಾಖಲೆಗಳ ಪ್ರಕಾರ ಈ ಕೆಳಗಿನಂತಿಯಿದೆಯೆಂದು ದೃಢೀಕರಿಸಿದೆ.

ಖಾಯಂ ವಿಳಾಸ : ______________________________

______________________________

______________________________

______________________________

ಸ್ಥಳ :
ದಿನಾಂಕ :

ಕಛೇರಿ
ಮೊಹರು

ಉಪ ನಿರ್ದೇಶಕರು
ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ

## ನಮೂನೆ - 2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ______________________________ರವರ/ ಮಗ/ ಮಗಳು/ ಪತಿ/ ಪತ್ನಿ ಶ್ರೀ/ ಶ್ರೀಮತಿ/ಕುಮಾರಿ ____________________ಜಿಲ್ಲೆ ____________ತಾಲ್ಲೂಕು____________, ಗ್ರಾಮ____________ದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ____________ ತರಗತಿವರೆಗೆ____________ಜಿಲ್ಲೆ____________ತಾಲ್ಲೂಕು__________ಪಟ್ಟಣದ__________ ಶಾಲೆಯಲ್ಲಿ ವ್ಯಾಸಂಗ ಮಾಡಿ __________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಧೀನದಲ್ಲಿ ನಿಗದಿಪಡಿಸಿದ ಒಂದು ದೊಡ್ಡ ನಗರಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ:__________
ದಿನಾಂಕ:__________

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________________ರವರ ಮಗ / ಮಗಳು / ಪತಿ / ಪತ್ನಿ / ಶ್ರೀಮತಿ / ಕುಮಾರಿ____________________ಜಿಲ್ಲೆ____________ತಾಲ್ಲೂಕು ____________ ಗ್ರಾಮ____________ ದಲ್ಲಿ ವಾಸವಾಗಿರುವ ಇವರು __________ನೇ ತರಗತಿಯಿಂದ __________ನೇ ತರಗತಿವರೆಗೆ __________ ಶೈಕ್ಷಣಿಕ ವರ್ಷದಿಂದ ____________ಶೈಕ್ಷಣಿಕ ವರ್ಷದವರೆಗೆ ____________________ ______________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಮೇಲು ರುಜು ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ:__________
ದಿನಾಂಕ:__________